ಬೆಂಗಳೂರು ನಗರದಲ್ಲಿ ರೆವಿನ್ಯೂ ಜಾಗಗಳಲ್ಲಿ ನಿರ್ಮಿಸಿರುವ ಅನಧಿಕೃತ ನಿರ್ಮಾಣಗಳನ್ನು ಸಕ್ರಮಗೊಳಿಸುವುದು

2090 - ಶ್ರೀ ಆರ್. ವಿ. ದೇಶಪಾಂಡೆ (ಹಳಿಯಾಳ) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ರೆವಿನ್ಯೂ ಜಾಗಗಳಲ್ಲಿ ಅನಧಿಕೃತವಾಗಿ ಮನೆ ಕಟ್ಟಡಗಳನ್ನು ನಿರ್ಮಿಸಿರುವ ವಿಚಾರ ಸರ್ಕಾರಕ್ಕೆ ತಿಳಿದಿದೆಯೇ?

ಆ) ಈ ಅನಧಿಕೃತ ನಿರ್ಮಾಣಗಳನ್ನು ಸಕ್ರಮಗೊಳಿಸುವುದಾಗಿ ಸರ್ಕಾರ ಈ ಹಿಂದೆ ಭರವಸೆ, ನೀಡಿರುವುದು ನಿಜವಲ್ಲವೇ?

ಇ) ಹಾಗಿದ್ದಲ್ಲಿ, ಇದುವರೆವಿಗೂ ಅನಧಿಕೃತ ನಿರ್ಮಾಣವನ್ನು ಸಕ್ರಮಗೊಳಿಸದೇ ಇರಲು ಕಾರಣಗಳೇನು?

ಶ್ರೀ ಎಸ್. ಬಂಗಾರಪ್ಪ (ಮುಖ್ಯ ಮಂತ್ರಿಗಳು) :

ಅ) ಹೌದು

ಆ) ಹೌದು

ಇ) ಈ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

ಹೈದ್ರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿಗೆ ಹಣ ಬಿಡುಗಡೆ

2099 - ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) : ಮಾನ್ಯ ಯೋಜನಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೈದರಾಬಾದ್ - ಕರ್ನಾಟಕ ಅಭಿವೃದ್ಧಿ ಮಂಡಳಿಗೆ ಸರ್ಕಾರದಿಂದ ಬಿಡುಗಡೆ ಮಾಡಿರುವ ಒಟ್ಟು ಮೊತ್ತವೆಷ್ಟು.

ಆ) ಈ ವೈಕಿ ಅಭಿವೃದ್ಧಿ ಮಂಡಳಿಯಿಂದ ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ ಬಿಡುಗಡೆ ಮಾಡಲಾದ ಹಣವೆಷ್ಟು (ಈ ಮಂಡಳಿಯ ವ್ಯಾಪ್ತಿಗೆ ಬರುವ ಎಲ್ಲಾ ವಿಧಾನ ಸಭಾ ಕ್ಷೇತ್ರಕ್ಕೆ ಬಿಡುಗಡೆ ಮಾಡಿರುವ ಹಣದ ಮೊತ್ತದ ಬಗ್ಗೆ ವಿವರಗಳನ್ನು ನೀಡುವುದು)

ಇ) ಬೀದರ್ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ವಿಧಾನ ಸಭಾ ಕ್ಷೇತ್ರಗಳಲ್ಲಿ ಈ ಹಣದ ಇಲ್ಲಿಯವರೆಗೆ ಕೈಗೊಂಡಿರುವ ಅಭಿವೃದ್ಧಿ ಕಾರ್ಯಗಳೇನು. (ಪ್ರತಿಯೊಂದು ವಿಧಾನ ಸಭಾ ಕ್ಷೇತ್ರದ ಬಗ್ಗೆ ಪ್ರತ್ಯೇಕ ವಿವರಗಳನ್ನು ನೀಡುವುದು)

ಶ್ರೀಮತಿ ಕೆ. ಎಸ್. ನಾಗರತ್ನಮ್ಮ (ಯೋಜನಾ, ಸಾಂಖ್ಯಿಕ ಹಣಕಾಸು ಮತ್ತು ಸಾಂಖ್ಯಿಕ ಮಂತ್ರಿಗಳು)

ಅ) 1990-91ನೇ ಸಾಲಿನಲ್ಲಿ 50.21 ಕೋಟಿ ರೂಗಳನ್ನು ಮತ್ತು 1991-92ನೇ ಸಾಲಿನಲ್ಲಿ 50-00ಕೋಟಿ ರೂಗಳನ್ನು ಪ್ರಸ್ತಾವಿಸಲಾಗಿದೆ.

ಆ) ಪ್ರತಿ ವಿಧಾನ ಸಭಾ ಕ್ಷೇತ್ರಕ್ಕೆ ಮೂರು ವರ್ಷಗಳ ಅವಧಿಯವರೆಗೂ ಕಾರ್ಯಗಳನ್ನು ಕೈಗೊಳ್ಳಲು 150 ಲಕ್ಷ ರೂ ಮೌಲ್ಯದ ಕಾಮಗಾರಿಗಳನ್ನು ಮಂಜೂರುಮಾಡಲಾಗಿದೆ. ಪ್ರತಿಯೊಂದು ತಾಲ್ಲೂಕಿನಲ್ಲಿ ಕೈಗೊಳ್ಳಲಾದ ಕಾಮಗಾರಿಯ ಪ್ರಗತಿಯನ್ನು ನೋಡಿ ನಿಧಿಗಳನ್ನು ಬಿಡುಗಡೆ ಮಾಡಲಾಗಿದೆ.